# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಎಸ್.ಎಸ್.ಎಲ್.ಸಿ. ಹಾಗೂ ನಂತರ ವ್ಯಾಸಂಗ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ನೀಡುವ ಬಗ್ಗೆ.

ಓದಲಾಗಿದೆ: ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಪತ್ರ ಸಂಖ್ಯೆ: ವಿಹಿನಾಸಇ/ಯೋ.ಶಾ/ಹೊಸ ಯೋಜನೆ/ಲ್ಯಾಪ್‌ಟಾಪ್/21/2013-14/142, ದಿನಾಂಕ: 3.4.2014.

ಪ್ರಸ್ತಾವನೆ:

2014-15ನೇ ಸಾಲಿನ ಆಯವ್ಯಯದಲ್ಲಿ ಹೆಚ್ಚು ಜನ ಅಂಧ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಹೊಂದಲು ಅನುಕೂಲವಾಗುವಂತೆ ಟಾಕಿಂಗ್ ಲ್ಯಾಪ್‌ಟಾಪ್ ನೀಡುವ ಯೋಜನೆಯನ್ನು ಘೋಷಿಸಲಾಗಿದೆ. ಎಸ್.ಎಸ್.ಎಲ್.ಸಿ. ಹಾಗೂ ನಂತರ ವ್ಯಾಸಂಗ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ಶಿಕ್ಷಣವನ್ನು ಉತ್ತೇಜಿಸುವ ಸಲುವಾಗಿ ಟಾಕಿಂಗ್ ಲ್ಯಾಪ್‌ಟಾಪ್‌ನ್ನು ನೀಡುವ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು ಮೇಲೆ ಓದಲಾದ ದಿನಾಂಕ: 3.4.2014 ರ ಪತ್ರದಲ್ಲಿ ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 113 ಪಿಎಚ್‌ಪಿ 2014, ಬೆಂಗಳೂರು, ದಿನಾಂಕ: 3.7.2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಹೆಚ್ಚು ಜನ ಅಂಧ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಪಡೆಯುವುದಕ್ಕೆ ಪ್ರೋತ್ಸಾಹಿಸಲು ಟಾಕಿಂಗ್ ಲ್ಯಾಪ್‌ಟಾಪ್ ನೀಡಲು ಆಡಳಿತಾತ್ಮಕ ಅನುಮೋದನೆ ನೀಡಿದೆ.

ಈ ಯೋಜನೆಗೆ ತಗಲುವ ವೆಚ್ಚ ರೂ.400.00 ಲಕ್ಷಗಳನ್ನು ಲೆಕ್ಕಶೀರ್ಷಿಕೆ 2235-02-101-0-52-100 ಧನಸಹಾಯ (ಯೋಜನೆ) ರಡಿಯಲ್ಲಿ ಒದಗಿಸಿರುವ ಅನುದಾನದಲ್ಲಿ ಭರಿಸತಕ್ಕದ್ದು.

ಈ ಆದೇಶಕ್ಕೆ ಲಗತ್ತಿಸಿರುವ ಮಾರ್ಗಸೂಚಿಗಳ ಪ್ರಕಾರ ಯೋಜನೆಯನ್ನು ಅನುಷ್ಠಾನಗೊಳಿಸುವುದು.

. . . . 2

ಈ ಆದೇಶವನ್ನು ಕ್ರಮವಾಗಿ ಆರ್ಥಿಕ ಇಲಾಖೆ, ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ. ಆಇ 482 ವೆಚ್ಚ–3/2014, ದಿನಾಂಕ: 19.6.2014 ಹಾಗೂ ಪಿಡಿ 13 ಐಪಿಎಂ 2014, ದಿನಾಂಕ: 29.5.2014 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ಕೆ.ಜಿರಳಿ)
ಸರ್ಕಾರದ ಅಧೀನ ಕಾರ್ಯದರ್ಶಿ–2
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
ಹಾಗೂ ವಿಕಲಚೇತನರ ಮತ್ತು ಹಿರಿಯ
ನಾಗರಿಕರ ಸಬಲೀಕರಣ ಇಲಾಖೆ
ದೂರವಾಣಿ ಸಂಖ್ಯೆ:22032240.

ಇವರಿಗೆ:–

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
4. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
5. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು,ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ – 3 & 9).
8. ನಿರ್ದೇಶಕರು, ಯೋಜನಾ ಇಲಾಖೆ (ಪಿ.ಎಂ.ಐ. ವಿಭಾಗ).
9. ಎಲ್ಲಾ ಜಿಲ್ಲೆಯ ಉಪ ನಿರ್ದೇಶಕರು/ ಸಹಾಯಕ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ (ನಿರ್ದೇಶಕರ ಮುಖಾಂತರ).
10. ಎಲ್ಲಾ ಜಿಲ್ಲೆಯ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ (ನಿರ್ದೇಶಕರ ಮುಖಾಂತರ).
11. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

## ಸರ್ಕಾರದ ಆದೇಶ ಸಂಖ್ಯೆ: ಮಮಇ 113 ಪಿಎಚ್‌ಪಿ 2014, ದಿನಾಂಕ: 3.7.2014 ರ ಆದೇಶಕ್ಕೆ ಮಾರ್ಗಸೂಚಿಗಳು

1. ಅಂಧ ವ್ಯಕ್ತಿಗಳು ಭಾರತದ ಪ್ರಜೆಯಾಗಿರಬೇಕು ಮತ್ತು ಕರ್ನಾಟಕದಲ್ಲಿ ಕನಿಷ್ಟ 10 ವರ್ಷಗಳು ವಾಸವಾಗಿರುವ ಬಗ್ಗೆ ತಹಸೀಲ್ದಾರರಿಂದ ಪ್ರಮಾಣ ಪತ್ರ ಸಲ್ಲಿಸಬೇಕು.
2. ಎಸ್.ಎಸ್.ಎಲ್.ಸಿ. ಹಾಗೂ ನಂತರದ ವ್ಯಾಸಂಗ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ಮಾತ್ರ ಲ್ಯಾಪ್‌ಟಾಪ್ ನೀಡಲಾಗುವುದು.
3. ಲ್ಯಾಪ್‌ಟಾಪ್ ಪಡೆಯುವ ವಿದ್ಯಾರ್ಥಿಯು ವ್ಯಾಸಂಗ ಮಾಡುತ್ತಿರುವ ಕಾಲೇಜು/ ಸಂಸ್ಥೆಯ ಮುಖ್ಯಸ್ಥರಿಂದ ದೃಢೀಕರಣ ಶಿಫಾರಸ್ಸಿನೊಂದಿಗೆ ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಸಲ್ಲಿಸುವುದು
4. ಜಿಲ್ಲಾ ಮಟ್ಟದಲ್ಲಿ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಅಂಧರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆ ಒಬ್ಬ ಮುಖ್ಯಸ್ಥರ ಅಧ್ಯಕ್ಷತೆಯಲ್ಲಿ ರಚಿಸಲಾಗುವ ಸಮಿತಿಯಲ್ಲಿ ಫಲಾನುಭವಿಯನ್ನು ಆಯ್ಕೆ ಮಾಡುವುದು.
5. ಈ ಯೋಜನೆಯ ಸೌಲಭ್ಯ ಪಡೆಯಲು ಯಾವುದೇ ಆದಾಯ ಮಿತಿಯಿರುವುದಿಲ್ಲ.
6. ಸರ್ಕಾರ ನೀಡುವ ಲ್ಯಾಪ್‌ಟಾಪ್‌ನ್ನು ಯಾವುದೇ ಕಾರಣಕ್ಕೆ ಪರಬಾರೆ ಮಾಡಬಾರದು, ಮಾಡಿದ್ದು ಕಂಡುಬಂದಲ್ಲಿ ಅಂತಹವರ ಮೇಲೆ ಕ್ರಮ ಜರುಗಿಸಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.
7. ಲ್ಯಾಪ್‌ಟಾಪ್‌ನ್ನು ಪಡೆಯುವ ವಿದ್ಯಾರ್ಥಿಯು ರೂ.100/– ಗಳ ಛಾಪಾಕಾಗದದಲ್ಲಿ ಮುಚ್ಚಳಿಕೆ ಬರೆದು ಕೊಡುವುದು.
8. ಲ್ಯಾಪ್‌ಟಾಪ್‌ನ್ನು ಪಡೆಯುವ ವಿದ್ಯಾರ್ಥಿಯು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಸಲ್ಲಿಸುವುದು.
9. ಈ ಸೌಲಭ್ಯವನ್ನು ಪಡೆಯುವ ವಿಕಲಚೇತನ ವಿದ್ಯಾರ್ಥಿಗಳು ಶೇ.40% ಕ್ಕಿಂತ ಹೆಚ್ಚು ದೃಷ್ಟಿದೋಷವುಳ್ಳವಾಗಿರಬೇಕು.
10. ಅಂಗವಿಕಲರ ಅಧಿನಿಯಮದಲ್ಲಿ ಸೂಚಿಸಿರುವ ಹಾಗೂ ವೈದ್ಯಕೀಯ ಪ್ರಾಧಿಕಾರದಿಂದ ನೀಡಿರುವ ಗುರುತಿನ ಚೀಟಿಯೊಂದಿಗೆ ಶಿಫಾರಸ್ಸು ಮಾಡಿರುವ ದೃಢೀಕೃತ ವೈದ್ಯಕೀಯ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕು.
11. ಲ್ಯಾಪ್‌ಟಾಪ್‌ನ್ನು ವಿದ್ಯಾರ್ಥಿಗಳು ಶಿಕ್ಷಣದ ಸಲುವಾಗಿಯೇ ಉಪಯೋಗಿಸತಕ್ಕದ್ದು.
12. ಈ ಯೋಜನೆಯನ್ನು ಅನುಷ್ಠಾನಗೊಳಿಸುವ ಅಧಿಕಾರವು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳದ್ದಾಗಿರುತ್ತದೆ.
13. ಲ್ಯಾಪ್‌ಟಾಪ್‌ನ್ನು ಒಂದು ವಿದ್ಯಾರ್ಥಿಗೆ ಜೀವಿತ ಕಾಲದಲ್ಲಿ ಒಂದು ಬಾರಿ ಮಾತ್ರ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ. ಬೇರೆ ಇಲಾಖೆಗಳು ಅಥವಾ ಸಂಘ ಸಂಸ್ಥೆಗಳಿಂದ ಲ್ಯಾಪ್‌ಟಾಪ್‌ಅನ್ನು ಪಡೆದಿದ್ದಲ್ಲಿ ಅಂತಹವರು ಅರ್ಹರಾಗಿರುವುದಿಲ್ಲ.
14. ಲ್ಯಾಪ್‌ಟಾಪ್‌ನ್ನು, ಸ್ವೀಕರಿಸಿರುವ ಅರ್ಜಿಗಳ ಜೇಷ್ಠತೆ ಅನುಸಾರ ವಿತರಿಸಲಾಗುವುದು.
15. ನಿಯತ ಕಾಲಿತ ವಿದ್ಯಾರ್ಥಿಗಳು ಮಾತ್ರ ಮೇಲಿನ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.